ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿಇ/ಶೈಶಾ/ಪ್ರ.ಪಿ.ದಾ2020-21 ದಿನಾಂಕ:09-06-2021.

# ಸುತ್ತೋಲೆ

ವಿಷಯ:2021-22ನೇ ಸಾಲಿನ ಪ್ರಥಮ ಪಿ.ಯು.ಸಿ ತರಗತಿಗೆ ದಾಖಲಾತಿ ಪ್ರಕ್ರಿಯೆ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22ನೇ ಸಾಲಿನ ಪ್ರಥಮ ಪಿ.ಯು.ಸಿ ತರಗತಿಗಳಿಗೆ ವಿದ್ಯಾರ್ಥಿಗಳಿಗೆ ದಾಖಲಾತಿಯನ್ನು 2020-21ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆ ಫಲಿತಾಂಶ ಬಂದ ನಂತರ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯು "ದಾಖಲಾತಿ ಮಾರ್ಗಸೂಚಿ-2021-22" ಬಿಡುಗಡೆ ಮಾಡಿದ ನಂತರವೇ ಮಾಡಿಕೊಳ್ಳಲು ತಿಳಿಸಿದೆ. ಅಲ್ಲಿಯವರೆಗೂ ಯಾವುದೇ ರೀತಿಯಲ್ಲಿ **ಪ್ರಥಮ ಪಿ.ಯು.ಸಿ ಗೆ ದಾಖಲಾತಿ ನೀಡುವಂತಿಲ್ಲ** ಹಾಗೂ **ಆನ್‌ಲೈನ್ ತರಗತಿಗಳನ್ನು ಸಹ ನಡೆಸುವಂತಿಲ್ಲವೆಂದು** ಈ ಮೂಲಕ ತಿಳಿಸಿದೆ.

ಆದಾಗ್ಯೂ, ಯಾವುದೇ ಕಾಲೇಜುಗಳಲ್ಲಿ ಪ್ರಥಮ ಪಿ.ಯು.ಸಿ ಗೆ ದಾಖಲಾತಿಗಳು ನಡೆಸಿದ ಬಗ್ಗೆ ಹಾಗೂ ಆನ್‌ಲೈನ್ ತರಗತಿಗಳು ನಡೆಯುತ್ತಿರುವ ಬಗ್ಗೆ ಇಲಾಖೆಯ ಗಮನಕ್ಕೆ ಬಂದಲ್ಲಿ ಸಂಬಂಧಿಸಿದ ಕಾಲೇಜುಗಳ ಮೇಲೆ ಕಠಿಣ ಶಿಸ್ತು ಕ್ರಮ ತೆಗೆದುಕೊಳ್ಳಲಾಗುತ್ತದೆ ಅಲ್ಲದೇ ಆ ಕಾಲೇಜುಗಳ ಮಾನ್ಯತೆ ರದ್ದು ಪಡಿಸಲು ಕ್ರಮವಹಿಸಲಾಗುವುದು ಎಂದು ಈ ಮೂಲಕ ಸೂಚಿಸಿದೆ.

ಈ ಬಗ್ಗೆ ಎಲ್ಲಾ ಜಿಲ್ಲೆಗಳ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಸೂಕ್ತ ನಿಗಾ ವಹಿಸುವುದು ಅಲ್ಲದೇ ಈ ಮಾಹಿತಿಯನ್ನು ತಮ್ಮ ವ್ಯಾಪ್ತಿಯ ಎಲ್ಲಾ ಪ್ರಾಂಶುಪಾಲರ ಗಮನಕ್ಕೆ ತಂದು ಸೂಕ್ತ ಕ್ರಮ ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ನೀಡಿ, ತೆಗೆದುಕೊಂಡ ಕ್ರಮಗಳ ಬಗ್ಗೆ ವರದಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

Snehal

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ,

1) ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಸೂಕ್ತ ಕ್ರಮಕ್ಕಾಗಿ
2) ಸಹಾಯಕ ನಿರ್ದೇಶಕರು, ಇ-ಆಡಳಿತ ವಿಭಾಗ, ಇಲಾಖೆಯ ಜಾಲತಾಣದಲ್ಲಿ ಅಳವಡಿಸಲು.

ಮಾಹಿತಿಗಾಗಿ:-

1. ಆಪ್ತ ಕಾರ್ಯದರ್ಶಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು, ಕೊಠಡಿ ಸಂಖ್ಯೆ:262, ವಿಧಾನ ಸೌಧ, ಬೆಂಗಳೂರು-01.
2. ಆಪ್ತ ಕಾರ್ಯದರ್ಶಿಗಳು, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು-01.
3. ಕಚೇರಿ ಪ್ರತಿ.